**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 434/2016 ಸಿ.ಡಬ್ಲೂ.13 ಪಿ.ಡಬ್ಲೂ.12

| | |
|---|---|
| ಹೆಸರು | ಸಂತೋಷ |
| ತಂದೆ/ಗಂಡ | ಶಂಕರ |
| ವಯಸ್ಸು | 41 ವರ್ಷ |
| ಉದ್ಯೋಗ | ಪಿ.ಐ ಲೋಕಾಯುಕ್ತ ಬಿದರ |
| ವಾಸಸ್ಥಳ | ಬಿದರ |

ದಿನಾಂಕ 12-02-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ನಾನು ದಿಃ ಫೆಬ್ರವರಿ 2014 ರಿಂದ ಜೂಲೈ 2016 ರವರೆಗೆ ನಿಂಬರ್ಗಾ ಪೋಲಿಸ್ ಠಾಣೆಯಲ್ಲಿ ಪಿ ಎಸ್ ಐ ಅಂತಾ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 18-10-2015 ರಂದು ಚಾಸ-12 ರವರ ಕಡೆಯಿಂದ ಕಡತವನ್ನು ಪಡೆದುಕೊಂಡು ತನಿಖೆ ಕೈಗೊಂಡು ಅದೇ ದಿನ ಚಾಸಾ 2 ಮತ್ತು 3 ರವರ ಸಮಕ್ಷಮ ಗುನ್ನ ಸ್ಥಳದ ಪಂಚನಾಮೆಯನ್ನು 12.00 ರಿಂದ 1.00 ಗಂಟೆಯವರೆಗೆ ಜರುಗಿಸಿರುತ್ತೇನೆ. ಅದೇ ದಿನ ಚಾಸ-4 ರಿಂದ 9 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 01-01-2016 ರಂದು ಆರೋಪಿತರು ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದುಕೊಂಡು ಹಾಜರಾದ ಮೇರೆಗೆ ಸೂಕ್ತ ಜಾಮೀನನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿಃ 01-06-2016 ರಂದು ಚಾಸಾ 6 ಮತ್ತು 7 ರವರ ಗಾಯಯ ಪ್ರಮಾಣ ಪತ್ರಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದೇ ದಿನ ತನಿಖೆ ಪೂರ್ಣಗೊಂಡ ಕಾರಣ ಆರೋಪಿತರ ವಿರುದ್ದ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ಗುನ್ಹಾ ಸ್ಥಳದ ಪಂಚನಾಮೆಯನ್ನು ನೋಡಿ ಗುರುತಿಸಿದ ಕಾರಣ ನಿಪಿ-8, ಸಾಕ್ಷಿಯ ಸಹಿಯನ್ನು ನಿಪಿ. 8 ಎ ಅಂತಾ ಗುರುತಿಸಲಾಯಿತು. ಸಾಕ್ಷಿಯು ನಿಪಿ. 6 ಮತ್ತು 7 ರಲ್ಲಿ ಅವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ. 6 ಬಿ ಮತ್ತು 7 ಬಿ ಅಂತಾ ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದಲ್ಲಿ ಇರುವ ಆರೋಪಿತರನ್ನು ನೋಡಿ ಗುರುತಿಸುತ್ತಾರೆ.

ಪಾಟೀ ಸವಾಲುಃ  ಆರೋಪಿತರ ಪರ **ಶ್ರೀ. ಬಿ ಎ ಡಿ** ವಕೀಲರಿಂದ:

ನನ್ನ ತನಿಖಾ ಕಾಲದಲ್ಲಿ ಆರೋಪಿತರು ಮತ್ತೆ ಚಾಸ-1ರವರ ಮದ್ಯೆ ಸಿವಿಲ್ ವಾಜ್ಯ ಇದ್ದದ್ದು ತಿಳಿದು ಬಂದಿರುತ್ತದೆ ಎಂದರೆ ಸರಿ  ಸಾಕ್ಷಿಯು ಮುಂದುವರೆದು ಸದರಿ ವಾಜ್ಯಕ್ಕೂ ಈ ಪ್ರಕರಣಕ್ಕೂ ಸಂಬಂದ ಇಲ್ಲ ಎಂದು ನುಡಿಯುತ್ತಾರೆ. ನಾನು ಸದರಿ ಸಿವಿಲ್ ವಾಜ್ಯದ ಬಗ್ಗೆ ವಿಚಾರಣೆ ಮಾಡಿರುವುದಿಲ್ಲ ಎಂದರೆ ಸರಿ. ದೊ.ಪ ಸಲ್ಲಿಸುವ ಮುಂಚೆ ನಾನು ಕುಲಾಂಕುಷವಾಗಿ ದಾಖಲೆಗಳನ್ನು ಪರಿಶೀಲಸದೇ ಚಾಸ-1ರವರಿಗೆ ಸಹಾಯ ಮಾಡಲು ಸುಳ್ಳು ವರದಿ ಸಲ್ಲಿಸಿ ಸುಳ್ಳು ಸಾಕ್ಷ್ಷಿ ನುಡಿಯುತ್ತಿದ್ದೇನೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ